ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಕವಿಪ್ರನಿನಿ/ಬಿ64/12018/2020-21/06

ದಿನಾಂಕ : 25 JUL 2022

## ಸುತ್ತೋಲೆ

ವಿಷಯ: ಅಧಿಕಾರಿಗಳು ರವರಿಗೆ ಮುಂದಿನ ಉನ್ನತ ಹುದ್ದೆಯ ವೇತ ಶ್ರೇಣಿ ಹಾಗೂ ಕೆರಿಯರ್ ಅಡ್ವಾನ್ಸ್‌ಮೆಂಟ್ ಸೌಲಭ್ಯವನ್ನು ಮಂಜೂರು ಮಾಡುವ ಪ್ರಸ್ತಾವನೆಗಳನ್ನು ಪರಿಶೀಲಿಸದೇ ನಿಗಮದ ಅನುಮೋದನೆಗೆ ಸಲ್ಲಿಸುತ್ತಿರುವ ಬಗ್ಗೆ.

ಉಲ್ಲೇಖ:
1. ನಿಗಮದ ಆದೇಶ ಸಂಖ್ಯೆ:ಕವಿಪ್ರನಿನಿ/ಬಿ16/5816/1982-83, ದಿನಾಂಕ:07.09.1982
2. ನಿಗಮದ ಆದೇಶ ಸಂಖ್ಯೆ:ಕವಿಪ್ರನಿನಿ/ಬಿ16/5816/1982-83, ದಿನಾಂಕ:02.11.2007
3. ನಿಗಮದ ಸುತ್ತೋಲೆಸಂಖ್ಯೆ:ಕವಿಪ್ರನಿನಿ/ಬಿ64/23585/2021-22, ದಿನಾಂಕ:26.05.2022

******

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶಗಳು ಮತ್ತು ಸುತ್ತೋಲೆನ್ವಯ ಅಧಿಕಾರಿಗಳು ಮುಂದಿನ ಉನ್ನತ ಹುದ್ದೆಯ ವೇತನ ಶ್ರೇಣಿ ಸೌಲಭ್ಯವನ್ನು ಹಾಗೂ ಕೆರಿಯರ್ ಅಡ್ವಾನ್ಸ್‌ಮೆಂಟ್ ಕಾರ್ಯಯೋಜನೆ ಸೌಲಭ್ಯವನ್ನು ಮಂಜೂರಾತಿಗಾಗಿ ಸಲ್ಲಿಸಲಾಗುತ್ತಿರುವ ಪ್ರಸ್ತಾವನೆಗಳು ಸಂಬಂಧಪಟ್ಟ ವಿಭಾಗೀಯ/ವೃತ್ತ/ವಲಯ ಅಥವಾ ನಿಗಮ ಕಾರ್ಯಾಲಯಗಳಿಂದ ಸಮುಚಿತ ಮಾರ್ಗದ ಮುಖೇನ ನಿಗಮದ ಅನುಮೋದನೆಗಾಗಿ ಸಲ್ಲಿಸಬೇಕಾಗಿರುತ್ತದೆ. ಇತ್ತೀಚಿನ ದಿನಗಳಲ್ಲಿ ಸಲ್ಲಿಸಲಾಗುತ್ತಿರುವ ಪ್ರಸ್ತಾವನೆಗಳಲ್ಲಿ ಹಲವಾರು ತಪ್ಪು/ದೋಷಗಳು ಕಂಡುಬಂದಿದ್ದು. ಈ ರೀತಿ ನಿರ್ಲಕ್ಷತೆಯಿಂದ ಸಲ್ಲಿಸಲಾಗುತ್ತಿರುವ ಪ್ರಸ್ತಾವನೆಗಳಿಂದ ನಿಗಮದ ಸಮಯವ ವ್ಯರ್ಥವಾಗುತ್ತಿದ್ದು ಗಂಭೀರವಾಗಿ ಪರಿಗಣಿಸಿರುತ್ತದೆ.

ಉಲ್ಲೇಖಿತ ಆದೇಶ ಹಾಗೂ ಸುತ್ತೋಲೆಗಳಲ್ಲಿ ತಿಳಿಸಿರುವಂತೆ ಮುಂದಿನ ಉನ್ನತ ಹುದ್ದೆಯ ವೇತನ ಶ್ರೇಣಿ ಮತ್ತು ಕೆರಿಯರ್ ಅಡ್ವಾನ್ಸ್‌ಮೆಂಟ್ ಸೌಲಭ್ಯದ ಪ್ರಸ್ತಾವನೆಗಳನ್ನು ಸಲ್ಲಿಸುವ ಮೊದಲು ಅರ್ಹತೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ನಿಗಮಕ್ಕೆ ಸಲ್ಲಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ. ತಪ್ಪಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ)
ಕವಿಪ್ರನಿನಿ.

ಪ್ರತಿಗಳು:

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ವಿದ್ಯುತ್ ಸರಬರಾಜು ಕಂಪನಿಗಳು/ಪಿಸಿಕೆಎಲ್.
2. ಎಲ್ಲಾ ಮುಖ್ಯ ಇಂಜಿನಿಯರ್(ವಿದ್ಯುತ್), ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
3. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿದ್ಯುತ್), ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
4. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿದ್ಯುತ್), ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
5. ಎಲ್ಲಾ ಲೆಕ್ಕಾಧಿಕಾರಿಗಳು, ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
6. ಪ್ರತಿ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ kptcl.karnataka.govt.in-->eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.